<u>ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ ಅಫಜಲಪೂರ</u>

<u>ಸಿಸಿ ನಂ. **226/2020**</u>

ಚಾಸಾ-8 ಫ್ರಾಸಾ-7

ಸತ್ಯ ಪ್ರತಿಜ್ಞೆಯ ಮೇರೆಗೆ ಪ್ರಮಾಣಿಕೃತ ಹೇಳಿಕೆ
ಪಡೆದುಕೊಳ್ಳಲಾಯಿತು.
ದಿನಾಂಕ: 13-03-2026

| | | |
|---|---|---|
| ಹೆಸರು | : | ಚಂದ್ರಕಾಂತ |
| ತಂದೆಯ ಹೆಸರು | : | ಕಲ್ಲನಗೌಡ @ ಕಲ್ಯಾಣಿ |
| ವಯಸ್ಸು | : | 44 ವರ್ಷ |
| ಉದ್ಯೋಗ | : | ಒಕ್ಕಲುತನ |
| ವಾಸಸ್ಥಳ | : | ಔರಳ್ಳಿ |

-: <u>ಮುಖ್ಯ ವಿಚಾರಣೆ :- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ :-</u>

ಚಾಸಾ 1, 4 ರಿಂದ 7 ಪರಿಚಯ ಇರುತ್ತಾರೆ.

ನನಗೆ ಈ ಪ್ರಕರಣ ಕುರಿತು ಯಾವುದೇ ಮಾಹಿತಿ ಇಲ್ಲ. ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)

<u>ಪಾಟೀ ಸವಾಲುಃ ಸ.ಸ.ಅ. ರವರಿಂದ</u>

ನಾನು ಗ್ರಾಮ ಪಂಚಾಯತಿ ಸದಸ್ಯನಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ 1 ರವರು ಬಿದನೂರು ಗ್ರಾಮ ಪಂಚಾಯತಿ PDO ಇರುತ್ತಾರೆ ಎಂದರೆ ಸರಿ. ನಮ್ಮ ಗ್ರಾಮದಲ್ಲಿ ತೆರೆದ ಬಾವಿ

ಹತ್ತಿರ ಯಾರೋ 5 ಜನ ವ್ಯಕ್ತಿಗಳು ಪೈಜಾಮ ಧರಿಸಿ ಗಡ್ಡ ಬಿಟ್ಟಿದ್ದು 1 ಕ್ಯಾನ ಹಿಡಿದುಕೊಂಡಿರುತ್ತಾರೆ ಎಂದು ಆರೋಪಿ ತಿಳಿಸಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಆನಂತರ ಚಾಸಾ 1 ಮತ್ತು ಗ್ರಾಮ ಪಂಚಾಯತಿ ಅಧ್ಯಕ್ಷ ಸದಸ್ಯರು ಸದರಿ ತೆರೆದ ಬಾವಿ ಹತ್ತಿರ ಹೋಗಿ ಪರಿಶೀಲನೆ ಮಾಡಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಷಯ ಸುಳು ಇರುತ್ತದೆ ಎಂದು ಗೊತ್ತಾಗಿ ಆರೋಪಿತನನ್ನು ಸ್ಥಳಕ್ಕೆ ಕರೆಸಿರುತ್ತೇವೆ ಎಂದರೆ ಸರಿಯಲ್ಲ. ಆರೋಪಿ ಈ ರೀತಿ ಆಗಿರುತ್ತದೆ ಎಂದು ನನಗೆ ತಿಳಿಸಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಸದರಿ ಬಾವಿ ಎರಡು ಊರಿನ ಕುಡಿಯುವ ನೀರಿನ ಮೂಲ ಆಗಿದರಿಂದ ಚಾಸಾ 1 ರವರು ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುತಾರೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿ ಸುಳ್ಳು ಸುದ್ದಿ ಹಬ್ಬಿಸಿ ಸದರಿ ನೀರನ್ನು ತನ್ನ ಸ್ವಂತ ಉಪಯೋಗಕ್ಕೆ ಬಳಸಿಕೊಂಡಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಈಗ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ಶ್ರೀ **DMD** ವಕೀಲರು ಗೈರು ಹಾಜರು ಇರುವುದರಿಂದ ಪಾಟೀಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರು ವಿಚಾರಣೆಃ - ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಸಿವಿಲ್ & ಪ್ರ.ದ.ನ್ಯಾ ದಂಡಾಧಿಕಾರಿಗಳು
ಅಫಜಲಪೂರ